2 4 MAR 2023

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಉನ್ನತ ಶಿಕ್ಷಣ ಇಲಾಖೆಯ ಅಡಿಯಲ್ಲಿ ಬರುವ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಸ್ನಾತ್ತಕೋತ್ತರ ಕೋರ್ಸುಗಳಿಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳಿಂದ ಶುಲ್ಕಗಳನ್ನು ಪಾವತಿಸಿಕೊಳ್ಳುವ ಬಗ್ಗೆ - ಆದೇಶ.

569916?
27/3/2023

**ಓದಲಾಗಿದೆ**:- ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಇವರ ಪತ್ರ ಸಂಖ್ಯೆ: ಕಾಶಿಇ/ ಶೈವಿ/52/ಸ್ನಾ.ಪ.ಕಾ/2022-23 ದಿನಾಂಕ: 19-09-2022.

---

**ಪ್ರಸ್ತಾವನೆ:-**

ಮೇಲೆ ಓದಲಾದ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ ಇವರ ಪತ್ರದಲ್ಲಿ ಸರ್ಕಾರಿ ರಾಂ ನಾರಾಯಣ ಚೆಲ್ಲಾರಾಂ, ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ಬೆಂಗಳೂರು ಕಾಲೇಜಿನಲ್ಲಿ ಸ್ನಾತ್ತಕೋತ್ತರ ಪದವಿಗೆ ಪ್ರವೇಶಾತಿ ಪಡೆಯಲಿಚ್ಛಿಸುವ ವಿದ್ಯಾರ್ಥಿಗಳು ಪ್ರವೇಶಾತಿ ಸಂಬಂಧಿತ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿ ತೆರಳುವ ಸಂದರ್ಭದಲ್ಲಿ ವಿಶ್ವವಿದ್ಯಾಲಯದ ಅನುಮೋದನಾ ಶುಲ್ಕದೊಂದಿಗೆ Self Finance Scheme ಅಡಿಯಲ್ಲಿ ಹೆಚ್ಚುವರಿ ಶುಲ್ಕಗಳನ್ನು ವಿಶ್ವವಿದ್ಯಾಲಯಕ್ಕೆ ಪಾವತಿಸಿಕೊಂಡು ತದನಂತರ ವಿಶ್ವವಿದ್ಯಾಲಯದವರು ಅನುಮೋದನಾ ಶುಲ್ಕವನ್ನು ಕಟಾಯಿಸಿ ಇನ್ನುಳಿದ ಶುಲ್ಕವನ್ನು ಮರುಪಾವತಿಸುತಿದ್ದು, ತದನಂತರ ವಿದ್ಯಾರ್ಥಿಗಳ ಖಾತೆಗೆ ಜಮೆ ಮಾಡಲಾಗುತ್ತಿದೆ. ಈ ರೀತಿ ಪಾವತಿಯಾದ ಶುಲ್ಕ ವಿಶ್ವವಿದ್ಯಾಲಯದಿಂದ ಕಾಲೇಜಿಗೆ ಹಲವು ತಿಂಗಳುಗಳ ನಂತರ ಜಮೆಯಾಗುತ್ತಿದ್ದು, ಇದರಿಂದ ವಿದ್ಯಾರ್ಥಿಗಳು ಆರ್ಥಿಕ ಸಂಕಷ್ಟವನ್ನು ಅನುಭವಿಸಬೇಕಾಗಿರುತ್ತದೆ. ಆದುದರಿಂದ ವಿಶ್ವವಿದ್ಯಾಲಯ / ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಇವರಿಗೆ ಸದರಿ ಶುಲ್ಕವನ್ನು (ಹೆಚ್ಚುವರಿ ಶುಲ್ಕ) ಪಾವತಿಸಿಕೊಳ್ಳದಂತೆ ಮಾರ್ಗದರ್ಶನ ನೀಡಬೇಕೆಂದು ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಸಂಸ್ಥೆಗಳ ಕಾಲೇಜುಗಳ ಸ್ನಾತಕೋತ್ತರ ಕೋರ್ಸುಗಳ ಪ್ರವೇಶಾತಿಗೆ ವಿಶ್ವವಿದ್ಯಾಲಯದಿಂದ ನಡೆಸಲಾಗುವ ಕೌನ್ಸಿಲಿಂಗ್ ಪ್ರಕ್ರಿಯೆಯಲ್ಲಿಅನುಮೋದನಾ ಶುಲ್ಕದೊಂದಿಗೆ ಪಾವತಿಸಿಕೊಳ್ಳಲಾಗುವ ಹೆಚ್ಚುವರಿ ಶುಲ್ಕಗಳನ್ನು ಕಾಲೇಜಿಗೆ ವಿಳಂಬವಾಗಿ ಪಾವತಿಸಲಾಗುತ್ತಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳು ಆರ್ಥಿಕ ಸಂಕಷ್ಟ ಎದುರಿಸಬೇಕಾಗಿರುವ ಕಾರಣ, ವಿಶ್ವವಿದ್ಯಾಲಯಗಳು ಕೌನ್ಸಿಲಿಂಗ್ ಸಮಯದಲ್ಲಿ ವಿದ್ಯಾರ್ಥಿಗಳಿಂದ ಹೆಚ್ಚುವರಿ ಶುಲ್ಕಗಳನ್ನು ಪಾವತಿಸಿಕೊಳ್ಳದಿರುವ ಕುರಿತು ಸೂಕ್ತ ನಿರ್ಣಯ ಕೈಗೊಳ್ಳುವುದು ಅವಶ್ಯವಾಗಿರುವುದನ್ನು ಮನಗಂಡ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 547 ಯುಬಿವಿ 2022,**
**ಬೆಂಗಳೂರು, ದಿನಾಂಕ:16.03.2023**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, ಖಾಸಗಿ ಅನುದಾನಿತ ಮತ್ತು ಅನುದಾನ ರಹಿತ ಕಾಲೇಜುಗಳಲ್ಲಿನ

..2

ಸ್ನಾತಕೋತ್ತರ ಕೋರ್ಸ್‌ಗಳ ಸೀಟುಗಳ ಪೈಕಿ ವಿಶ್ವವಿದ್ಯಾಲಯ ಕೋಟಾದಡಿಯ ಸೀಟುಗಳ ದಾಖಲಾತಿಗಾಗಿ ನಡೆಸಲಾಗುವ ಪ್ರವೇಶಾತಿ ಪ್ರಕ್ರಿಯೆಯ ಸಂದರ್ಭದಲ್ಲಿ ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯ ಸಂಯೋಜನೆಗೊಳಿಸುವ ಸಾರ್ವಜನಿಕ ವಿಶ್ವವಿದ್ಯಾಲಯಗಳು ಈ ಕೆಳಗೆ ನಿಗಧಿಪಡಿಸಿರುವಂತೆ ಶುಲ್ಕಗಳನ್ನು ಮಾತ್ರ ವಿದ್ಯಾರ್ಥಿಗಳಿಂದ ಪಾವತಿಸಿಕೊಳ್ಳಲು ಸರ್ಕಾರವು ಆದೇಶಿಸಿದೆ.

1. ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಸಂಬಂಧಪಟ್ಟ ಸಾರ್ವಜನಿಕ ವಿಶ್ವವಿದ್ಯಾಲಯಗಳು ವಿದ್ಯಾರ್ಥಿಗಳಿಂದ ವಿಶ್ವವಿದ್ಯಾಲಯದ ನೋಂದಣಿ ಶುಲ್ಕ ಮತ್ತು ವಿಶ್ವವಿದ್ಯಾಲಯದ ಪರೀಕ್ಷಾ ಶುಲ್ಕಗಳನ್ನು ಮಾತ್ರ ಪಾವತಿಸಿಕೊಳ್ಳತಕ್ಕದ್ದು. ಇದನ್ನು ಹೊರತುಪಡಿಸಿ ಇತರೆ ಯಾವುದೇ ಶುಲ್ಕಗಳನ್ನು ಕಡ್ಡಾಯವಾಗಿ ಪಡೆಯತಕ್ಕದ್ದಲ್ಲ.
2. ಸೀಟುಗಳು ಹಂಚಿಕೆಯಾಗಿ ನಿಗಧಿಪಡಿಸಿದ ಸಂಬಂಧಪಟ್ಟ ಕಾಲೇಜುಗಳಲ್ಲಿ ಮಾತ್ರ ವಿದ್ಯಾರ್ಥಿಗಳಿಂದ ಇತರೆ ಎಲ್ಲಾ ಶುಲ್ಕಗಳನ್ನು ಪಾವತಿಸಿಕೊಳ್ಳತಕ್ಕದ್ದು.
3. 2022-23ನೇ ಶೈಕ್ಷಣಿಕ ಸಾಲಿನಲ್ಲಿ ಸಂಬಂಧಪಟ್ಟ ಸಾರ್ವಜನಿಕ ವಿಶ್ವವಿದ್ಯಾಲಯಗಳು ವಿದ್ಯಾರ್ಥಿಗಳಿಂದ ಪಾವತಿಸಿಕೊಂಡಿರುವ ವಿಶ್ವವಿದ್ಯಾಲಯದ ನೋಂದಣಿ ಶುಲ್ಕ ಮತ್ತು ವಿಶ್ವವಿದ್ಯಾಲಯದ ಪರೀಕ್ಷಾ ಶುಲ್ಕಗಳನ್ನು ಹೊರತುಪಡಿಸಿ ಇತರೆ ಎಲ್ಲಾ ಶುಲ್ಕಗಳನ್ನು ಸಂಬಂಧಪಟ್ಟ ಕಾಲೇಜುಗಳಿಗೆ 10 ದಿನಗಳೊಳಗಾಗಿ ವರ್ಗಾಯಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ನಂದಕುಮಾರ್ .ಬಿ)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2)

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ:ಕಾಶಿಇ/ಶೈವಿ/12/ಸ್ನಾತಕೋತ್ತರ ಶುಲ್ಕ/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 20.05.2023

ಉನ್ನತ ಶಿಕ್ಷಣ ಇಲಾಖೆಯ ಅಡಿಯಲ್ಲಿ ಬರುವ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಕೋರ್ಸುಗಳಿಗೆ ಸಂಬಂಧಿಸಿದಂತೆ ವಿದ್ಯಾರ್ಥಿಗಳಿಂದ ಶುಲ್ಕಗಳನ್ನು ಪಾವತಿಸಿಕೊಳ್ಳುವ ಬಗ್ಗೆ ಸರ್ಕಾರದಿಂದ ಹೊರಡಿಸಲಾಗಿರುವ ಸರ್ಕಾರದ ಆದೇಶ ಸಂಖ್ಯೆ: ಇಡಿ 547 ಯುಬಿವಿ 2022, ಬೆಂಗಳೂರು ದಿನಾಂಕ:16.03.2023ನ್ನು ಕೆಳಕಂಡವರ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ ಪರಿಚಲಿಸಲಾಗಿದೆ.

ಕಾಲೇಜು ಶಿಕ್ಷಣ ನಿರ್ದೇಶಕರು

ಇವರಿಗೆ:

1. ರಾಜ್ಯದ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಅಗತ್ಯ ಕ್ರಮಕ್ಕಾಗಿ.
2. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಲಾಗಿದೆ.
3. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಕಲಬುರಗಿ.

ಪ್ರತಿಯನ್ನು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತಶಾಖೆಗೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001.
2) ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಜಂಟಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ ಆಪ್ತ ಶಾಖೆಗೆ, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು. 3) ಕಛೇರಿ ಪ್ರತಿ